# ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 324
ಉತ್ತರಿಸಬೇಕಾದ ದಿನಾಂಕ : 19.08.2026
ಸದಸ್ಯರ ಹೆಸರು : ಡಾ. ಬಿ.ಜಿ. ಪಾಟೀಲ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರದಿಂದ ಚುನಾಯಿತರಾದವರು)
ಉತ್ತರಿಸುವ ಸಚಿವರು : ಮಾನ್ಯ ಉಪ ಮುಖ್ಯಮಂತ್ರಿಯವರು

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| ಅ) | ಕಲಬುರಗಿ ನಗರದ ಚಂದ್ರಶೇಖರ ಪಾಟೀಲ್ ಜಿಲ್ಲಾ ಕ್ರೀಡಾಂಗಣದಲ್ಲಿರುವ ಬ್ಯಾಡ್ಮಿಂಟನ್ ಅಂಕಣದಲ್ಲಿ ಮೂಲ ಸೌಲಭ್ಯ ಹಾಗೂ ಇನ್ನಿತರೆ ಸಮಸ್ಯೆಗಳಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಸರ್ಕಾರ ಯಾವ ಕ್ರಮ ಕೈಗೊಂಡಿದೆ; | ಕಲಬುರಗಿ ನಗರದ ಚಂದ್ರಶೇಖರ ಪಾಟೀಲ್ ಜಿಲ್ಲಾ ಕ್ರೀಡಾಂಗಣದಲ್ಲಿರುವ ಒಳಾಂಗಣ ಕ್ರೀಡಾಂಗಣದಲ್ಲಿ ಮರದ ನೆಲಹಾಸು, ಬ್ಯಾಡ್ಮಿಂಟನ್ ಮ್ಯಾಟ್, ಬ್ಯಾಡ್ಮಿಂಟನ್ ನೆಟ್ ಮತ್ತು ಪೋಲ್, ಫ್ಲಡ್ ಲೈಟ್ ವ್ಯವಸ್ಥೆ, ಕುಡಿಯುವ ನೀರಿನ ವ್ಯವಸ್ಥೆ, ಶೌಚಾಲಯ ಮತ್ತು ಬಟ್ಟೆ ಬದಲಾಯಿಸುವ ಕೊಠಡಿ, ಪ್ರೇಕ್ಷಕರ ಗ್ಯಾಲರಿ ಮತ್ತಿತರ ಎಲ್ಲಾ ಕನಿಷ್ಠ ಅಗತ್ಯ ಸೌಲಭ್ಯಗಳನ್ನು ಒದಗಿಸಲಾಗಿದ್ದು, ಪ್ರಸ್ತುತ ಕ್ರೀಡಾಪಟುಗಳ ಬಳಕೆಯಲ್ಲಿರುತ್ತವೆ. |
| ಆ) | ಬ್ಯಾಡ್ಮಿಂಟನ್ ಅಂಕಣದಿಂದ ವಾರ್ಷಿಕ ಅಥವಾ ಮಾಸಿಕ ಸಂಗ್ರಹವಾಗುವ ಹಣ ಎಷ್ಟು;<br><br>ಇಲ್ಲಿ ಸಂಗ್ರಹವಾಗುವ ಹಣವನ್ನು ಬ್ಯಾಡ್ಮಿಂಟನ್ ಅಂಕಣದ ಮೂಲಭೂತ ಸೌಕರ್ಯಗಳಿಗೆ ಮೀಸಲಿಡಲು ಸರ್ಕಾರಕ್ಕಿರುವ ಅಡೆತಡೆಗಳೇನು; | ಬ್ಯಾಡ್ಮಿಂಟನ್ ಅಂಕಣದಿಂದ ಮಾಸಿಕ ಸರಾಸರಿ ರೂ 56,870/- ಗಳು ಸಂಗ್ರಹವಾಗಿರುತ್ತದೆ.<br><br>ಇಲ್ಲಿ ಸಂಗ್ರಹವಾಗುವ ಮೊತ್ತವನ್ನು ಬ್ಯಾಡ್ಮಿಂಟನ್ ಅಂಕಣದ ನಿರ್ವಹಣೆ ಹಾಗೂ ಸ್ವಚ್ಛತಾಗಾರರ ಸೇವೆ ಪಡೆಯಲು ಬಳಕೆ ಮಾಡಿಕೊಳ್ಳಲಾಗುತ್ತಿದೆ. |
| ಇ) | ರಾಜಧಾನಿ ಬೆಂಗಳೂರು ಸೇರಿ ವಿವಿಧ ವಿಭಾಗದ ಮಟ್ಟದಲ್ಲಿರುವ ಬ್ಯಾಡ್ಮಿಂಟನ್ ಅಂಕಣಗಳನ್ನು ಹವಾ ನಿಯಂತ್ರಣ ವ್ಯವಸ್ಥೆಯಲ್ಲಿ ಮಾಡಲಾಗಿದೆ. ಕಲಬುರಗಿ ನಗರದ ಚಂದ್ರಶೇಖರ ಪಾಟೀಲ್ ಜಿಲ್ಲಾ ಕ್ರೀಡಾಂಗಣದಲ್ಲಿರುವ ಬ್ಯಾಡ್ಮಿಂಟನ್ ಅಂಕಣವನ್ನು ಯಾವಾಗ ಹವಾ ನಿಯಂತ್ರಣ ಅಂಕಣವನ್ನಾಗಿ ಮಾಡಲಾಗುವುದು? (ವಿವರ ನೀಡುವುದು) | ಕಲಬುರಗಿ ನಗರದ ಚಂದ್ರಶೇಖರ ಪಾಟೀಲ್ ಜಿಲ್ಲಾ ಕ್ರೀಡಾಂಗಣದಲ್ಲಿರುವ ಬ್ಯಾಡ್ಮಿಂಟನ್ ಅಂಕಣಕ್ಕೆ ಹವಾ ನಿಯಂತ್ರಣ ವ್ಯವಸ್ಥೆ ಕಲ್ಪಿಸುವ ಪ್ರಸ್ತಾವನೆ ಪ್ರಸ್ತುತ ಇರುವುದಿಲ್ಲ. |

ವೈಎಸ್‌ಡಿ-ಇಬಿಬಿ/82/2026

(ಡಾ. ಜಿ. ಪರಮೇಶ್ವರ)
ಉಪ ಮುಖ್ಯಮಂತ್ರಿ